**ಅತ್ಯಾದ್ಯತೆ**

# ಸರ್ವ ಶಿಕ್ಷಣ ಅಭಿಯಾನ

## ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ: ಸ.ಶಿ.ಅ/ಹೆ.ಮ.ಶಿ/ಮೀ.ಕಾ-1/2009-10 ದಿನಾಂಕ: 09-07-09

## ಸುತ್ತೋಲೆ

**ವಿಷಯ:** ಮೀನಾ ಕಾರ್ಯಕ್ರಮದಡಿಯಲ್ಲಿ ಶಾಲಾ ಮಕ್ಕಳು ಮನೆ ಮನೆಗೆ ಹೋಗಿ ಶಾಲೆ ಬಿಟ್ಟ ಮಕ್ಕಳನ್ನು ಶಾಲೆಗೆ ಕರೆತರುವ ವೇಳೆಯಲ್ಲಿ ವಹಿಸಬೇಕಾದ ಮುನ್ನೆಚ್ಚರಿಕೆ ಕುರಿತು.

**ಉಲ್ಲೇಖ:** ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಇವರ ಅಧ್ಯಕ್ಷತೆಯಲ್ಲಿ ಮಹಿಳಾ ಸಮಖ್ಯಾ ವಿಷಯದ ಬಗ್ಗೆ ದಿನಾಂಕ: 03-07-09 ರಂದು ಜರುಗಿದ ಸಭೆಯ ನಡವಳಿ.

*****

ಮೇಲಿನ ವಿಷಯ ಹಾಗೂ ಉಲ್ಲೇಖದನ್ವಯ, ಮೀನಾ ಕಾರ್ಯಕ್ರಮದಡಿ ಶಾಲಾ ಮಕ್ಕಳು ಮನೆಮನೆಗೆ ಹೋಗಿ ಶಾಲೆ ಬಿಟ್ಟ ಮಕ್ಕಳನ್ನು ಶಾಲೆಗೆ ಕರೆತರಲು ಪೋಷಕರನ್ನು ಸಂಪರ್ಕಿಸಿ, ಮನವೊಲಿಸುತ್ತಿದ್ದಾರೆ. ಈ ಕಾರ್ಯದಲ್ಲಿ ಅನೇಕ ಶಾಲೆಯಿಂದ ಹೊರಗಿರುವ ಮಕ್ಕಳು ಶಾಲೆಗೆ ಸೇರಿದ, ಬಾಲ್ಯ ವಿವಾಹದ ವಿರುದ್ಧ ಹೋರಾಡಿದ ಯಶೋಗಾಥೆಗಳು ಇವೆ. ಇದು ಹೆಣ್ಣುಮಕ್ಕಳ ಶಿಕ್ಷಣಕ್ಕೆ ಉತ್ತೇಜನಕಾರಿಯಾಗಿದೆ. ಆದರೂ ಮೀನಾ ಕಾರ್ಯಕ್ರಮದಡಿ ಸಕ್ರಿಯವಾಗಿರುವ ಮಕ್ಕಳು ತಮ್ಮ ಹಕ್ಕುಗಳನ್ನು ಹೊಂದುವಲ್ಲಿ ವಂಚಿತರಾಗಬಹುದು. ಮೀನಾ ಕಾರ್ಯಕ್ರಮದಡಿ ಶಾಲಾ ಮಕ್ಕಳು ಮನೆಮನೆಗೆ ಹೋಗಿ ಶಾಲೆ ಬಿಟ್ಟ ಮಕ್ಕಳನ್ನು ಶಾಲೆಗೆ ಕರೆತರುವ ಕಾರ್ಯದಲ್ಲಿ ಈ ಕೆಳಗಿನ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಲು ಸೂಚಿಸಿದೆ.

- ಶಾಲೆ ಬಿಟ್ಟ ಮಕ್ಕಳನ್ನು ಶಾಲೆಗೆ ಕರೆತರಲು ಮನೆಮನೆಗೆ ಭೇಟಿ ಕೊಡುವ ವೇಳೆ ಮಕ್ಕಳ ಜೊತೆ ಸಂಬಂಧಿಸಿದ ಶಾಲಾ ಶಿಕ್ಷಕರು ಅಥವಾ ಜೆಂಡರ್ ಕೋ-ಆರ್ಡಿನೇಟರ್ ಕಡ್ಡಾಯವಾಗಿ ಜೊತೆಯಲ್ಲಿರುವಂತೆ ಕ್ರಮ ತೆಗೆದುಕೊಳ್ಳುವುದು.
- ಮೀನಾ ಕಾರ್ಯಕ್ರಮದಡಿ ಸಕ್ರಿಯರಾಗಿರುವ ಮಕ್ಕಳ ವಿದ್ಯಾಭ್ಯಾಸಕ್ಕೆ ಅಡ್ಡಿಯಾಗದಂತೆ ಎಚ್ಚರವಹಿಸಲು ಸೂಚಿಸಿದೆ.

(ಕರಡು ಮಾನ್ಯ ಯೋಜನಾ ನಿರ್ದೇಶಕರಿಂದ
ಅನುಮೋದಿಸಲ್ಪಟ್ಟಿದೆ)

ನಿರ್ದೇಶಕರು (ಕಾರ್ಯಕ್ರಮಗಳು)
ಸರ್ವ ಶಿಕ್ಷಣ ಅಭಿಯಾನ

**ಇವರಿಗೆ-ಮುಂದಿನ ಕ್ರಮಕ್ಕಾಗಿ**

1. ಎನ್.ಪಿ.ಇ.ಜಿ.ಇ.ಎಲ್ ಕಾರ್ಯಕ್ರಮ ಜಾರಿಯಲ್ಲಿರುವ ಡಿಡಿಪಿಐ, ಡಿವೈಪಿಸಿ.
2. ಎನ್.ಪಿ.ಇ.ಜಿ.ಇ.ಎಲ್ ಕಾರ್ಯಕ್ರಮ ಜಾರಿಯಲ್ಲಿರುವ ಬಿ.ಇ.ಓ, ಬಿ.ಆರ್.ಸಿ.

**ಮಾಹಿತಿಗಾಗಿ**

1. ಮಾನ್ಯ ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು-01-ರವರಿಗೆ ವಂದನೆಗಳೊಂದಿಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಸಾ.ಶಿ.ಇ., ಬೆಂಗಳೂರು.
3. ಅಪರ ಆಯುಕ್ತರು, ಸಾ.ಶಿ.ಇ., ಗುಲ್ಬರ್ಗಾ/ಧಾರವಾಡ.
4. ರಾಜ್ಯ ಕಾರ್ಯಕ್ರಮ ನಿರ್ದೇಶಕರು, ಮಹಿಳಾ ಸಮಖ್ಯಾ, #631, 22 ನೇ ಮೇನ್ ರೋಡ್, ಬಿ.ಎಂ.ಟಿ.ಸಿ, ಬಸ್ ಡಿಪೋ ಹತ್ತಿರ, 4 ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು

D:\2009-10 activities\Girls Education\Meena Programme.doc